ಕರ್ನಾಟಕ ಸರ್ಕಾರ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

**ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.**

---

**ಸಂಖ್ಯೆ : ವಾಸಾಸಂಇ : ಉ ನಿ : ಸುಮಪ : 2019–20** **ದಿನಾಂಕ: 02–08–2019**

**<u>ಪತ್ರಿಕಾ ಆಮಂತ್ರಣ</u>**

1. Inauguration of Circuit Bench of National Consumer Disputes Redressal Commission scheduled to be held from 5th August to 9th August, 2019 and Opening Ceremony of Additional Bench of Karnataka State Consumer Disputes Redressal Commission.

**Inauguration by:**

Hon'ble Justice R.K. Agrawal,
Hon'ble President, National Consumer Disputes Redressal Commission, New Delhi.

**Chief Guest:**

Hon'ble Justice Abhay Shreeniwas Oka,
Hon'ble Chief Justice,
High Court of Karnataka, Bengaluru.

**Presided Over:**

Hon'ble Justice Huluvadi G. Ramesh,
Hon'ble President, Karnataka State Consumer
Disputes Redressal Commission, Bengaluru.

**Invitees:**

T.M. Vijay Bhaskar, I.A.S.,
Chief Secretary to Government of Karnataka.

B. H. Anil Kumar, I.A.S.,
Addl. Chief Secretary to Government
Urban Development, Food Civil Supplies,
Consumer Affairs and Legal Metrology Department.

A.P. Ranganath,
President,
Advocates Association,
Bengaluru.

Place: 3rd August Saturday  Time: 10.30 A.M.

Venue:  4th Floor, Basava Bhavan, Highgrounds, Bengaluru.

## <u>ಪತ್ರಿಕಾ ಪ್ರಕಟಣೆ</u>

## <u>"ಹೊಯ್ಸಳ ಮತ್ತು ಕೆಳದಿ ಚೆನ್ನಮ್ಮ ಶೌರ್ಯ ಪ್ರಶಸ್ತಿಗೆ" ಅರ್ಜಿ ಆಹ್ವಾನ</u>

ಬೆಂಗಳೂರು, ಆಗಸ್ಟ್ 2 ( ಕರ್ನಾಟಕ ವಾರ್ತೆ)

**ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ವತಿಯಿಂದ 6ರಿಂದ 18 ವರ್ಷದೊಳಗಿನ ಮಕ್ಕಳು ತಮ್ಮ ಪ್ರಾಣದ ಹಂಗನ್ನು ತೊರೆದು ಹಾಗೂ ಸಮಯಪ್ರಜ್ಞೆಯಿಂದ ಇತರರ ಪ್ರಾಣದ ರಕ್ಷಣೆಗಾಗಿ ಧೈರ್ಯ ಸಾಹಸ ಪ್ರದರ್ಶಿಸಿದ ಬಾಲಕರಿಗೆ "ಹೊಯ್ಸಳ" ಮತ್ತು ಬಾಲಕಿಯರಿಗೆ "ಕೆಳದಿ ಚೆನ್ನಮ್ಮ" ಪ್ರಶಸ್ತಿಯನ್ನು ಮಕ್ಕಳ ದಿನಾಚರಣೆ ಕಾರ್ಯಕ್ರಮದಲ್ಲಿ ಪ್ರದಾನ ಮಾಡುತ್ತದೆ. ಪ್ರಕರಣವು ಆಗಸ್ಟ್ 2018 ರಿಂದ ಜುಲೈ 2019ರೊಳಗೆ ನಡೆದಿರಬೇಕು. ದಿನಾಂಕ: 01.08.2001ರಂದು ಹಾಗೂ ನಂತರ ಜನಿಸಿದ ಮಕ್ಕಳು ಈ ಪ್ರಶಸ್ತಿಗೆ ಅರ್ಹರಾಗಿರುತ್ತಾರೆ.**

**ಪ್ರಶಸ್ತಿಗೆ ಆಯ್ಕೆಯಾದ ಮಕ್ಕಳಿಗೆ ತಲಾ ರೂ.10,000/-ಗಳ ನಗದು ಬಹುಮಾನ ಮತ್ತು ಪ್ರಶಸ್ತಿ ಪತ್ರ ಒಳಗೊಂಡಿರುತ್ತದೆ.**

**2019ನೇ ಸಾಲಿನ ಪ್ರಶಸ್ತಿಗಾಗಿ ನಿಗದಿಪಡಿಸಿರುವ ಅರ್ಜಿ ನಮೂನೆಗಳನ್ನು ಸಂಬಂಧಿಸಿದ ಜಿಲ್ಲೆಯ ಉಪ ನಿರ್ದೇಶಕರು, ಮಹಿಳೆಯರ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಇವರಿಂದ ಪಡೆದು ಭರ್ತಿ ಮಾಡಿದ ಅರ್ಜಿಗಳನ್ನು ಸಂಬಂಧಪಟ್ಟ ಜಿಲ್ಲೆಯ ಉಪ ನಿರ್ದೇಶಕರು, ಮಹಿಳೆಯರ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಇವರಿಗೆ ದಿನಾಂಕ: 31.08.2019 ರೊಳಗೆ ಕನ್ನಡ ಭಾಷೆಯಲ್ಲಿಯೇ ಸಲ್ಲಿಸತಕ್ಕದ್ದು ಎಂದು ಇಲಾಖೆ ಪ್ರಕಟಣೆ ತಿಳಿಸಿದೆ.**

## REGARDING INVITATION OF APPLICATIONS FOR "HOYSALA AND KELADI CHENNAMMA BRAVERY AWARD" FOR CHILDREN

**Bengaluru, August 2nd (Karnataka Information)**

The Department of Women and Child Development, Government of Karnataka on the occasion of Children's Day, confers Bravery Award for the Children in the age group of 6 to 18 years who have exhibited exceptional courage and presence of mind to save the life of others in dangerous circumstances. Boys are identified under "Hoysala" and girls under "Keladi Chennamma" Award. The incident should have occurred between August 2018 to July 2019. Children born on or after 01.08.2001 are eligible for this Award. The Award carries cash prize of Rs. 10,000/- and a citation.

The prescribed forms for the year 2019 may be obtained from the Deputy Director of Women & Child Development Department in the respective Districts. The filled applications should be submitted to the concerned District Deputy Director of Women & Child Development Department on or before 31.08.2019. The applications should be submitted in Kannada only says an official Press Release.

## ಮಕ್ಕಳ ಕಲ್ಯಾಣ ಕ್ಷೇತ್ರದಲ್ಲಿ ಸೇವೆ ಸಲ್ಲಿಸಿದ ವ್ಯಕ್ತಿಗಳಿಗೆ ಮತ್ತು ಸಂಸ್ಥೆಗಳಿಗೆ ರಾಜ್ಯ ಪ್ರಶಸ್ತಿ ನೀಡಲು ನಾಮ ನಿರ್ದೇಶನ

ಬೆಂಗಳೂರು, ಆಗಸ್ಟ್ 2 ( ಕರ್ನಾಟಕ ವಾರ್ತೆ)

ಕರ್ನಾಟಕ ಸರ್ಕಾರವು ಮಕ್ಕಳ ಕಲ್ಯಾಣ ಕ್ಷೇತ್ರದಲ್ಲಿ ಕನಿಷ್ಠ 5 ವರ್ಷಗಳ ಕಾಲ ಅತ್ಯುತ್ತಮ ಸೇವೆ ಸಲ್ಲಿಸಿರುವಂತಹ ವ್ಯಕ್ತಿಗಳಿಗೆ ತಲಾ ರೂ.25,000/–ಗಳ ನಗದು ಬಹುಮಾನ ಮತ್ತು ಪ್ರಶಸ್ತಿ ಪತ್ರ ಹಾಗೂ ಸಂಸ್ಥೆಗಳಿಗೆ ತಲಾ ರೂ.1,00,000/– ನಗದು ಬಹುಮಾನ ಹಾಗೂ ಪ್ರಶಸ್ತಿ ಪತ್ರವನ್ನು ಮಕ್ಕಳ ದಿನಾಚರಣೆಯಂದು ಪ್ರದಾನ ಮಾಡಿ ಗೌರವಿಸುತ್ತದೆ.

2019ನೇ ಸಾಲಿನ ಪ್ರಶಸ್ತಿಗಾಗಿ ನಿಗದಿಪಡಿಸಿರುವ ಅರ್ಜಿ ನಮೂನೆಗಳನ್ನು ಸಂಬಂಧಿಸಿದ ಜಿಲ್ಲೆಯ ಉಪ ನಿರ್ದೇಶಕರು, ಮಹಿಳೆಯರ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಇವರಿಂದ ಪಡೆದು ಭರ್ತಿ ಮಾಡಿದ ಅರ್ಜಿಗಳನ್ನು ದ್ವಿಪ್ರತಿಯಲ್ಲಿ ಸಂಬಂಧಪಟ್ಟ ಜಿಲ್ಲೆಯ ಉಪ ನಿರ್ದೇಶಕರು, ಮಹಿಳೆಯರ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಇವರಿಗೆ ದಿನಾಂಕ: 31.08.2019ರೊಳಗೆ ಸಲ್ಲಿಸತಕ್ಕದ್ದು. ನಿಗದಿತ ದಿನಾಂಕದ ನಂತರ ಸಲ್ಲಿಸಿದ ಅರ್ಜಿಗಳನ್ನು ಯಾವುದೇ ಕಾರಣಕ್ಕೂ ಪರಿಗಣಿಸಲಾಗುವುದಿಲ್ಲ. ಅರ್ಜಿಗಳನ್ನು ಕನ್ನಡ ಭಾಷೆಯಲ್ಲಿಯೇ ಸಲ್ಲಿಸತಕ್ಕದ್ದು ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಪ್ರಕಟಣೆ ತಿಳಿಸಿದೆ.

## APPLICATIONS INVITED FOR STATE AWARD FOR INDIVIDUALS AND INSTITUTIONS IN THE FIELD OF CHILD WELFARE

**Bengaluru, August 2nd (Karnataka Information)**

Government of Karnataka confers award to Individuals and Institutions who have worked for the welfare of children for more than 5 years. Individual award carries cash prize of Rs.25,000/- and a citation and Institutional award carries cash prize of Rs.1,00,000/- and a citation.

The prescribed forms for the year 2019 may be obtained from the Deputy Director of Women & Child Development Department in the respective Districts. The filled applications should be submitted to the concerned District Deputy Director of Women & Child Development Department on or before 31.08.2019. The applications received after due date will not be considered. The applications should be submitted in Kannada only says an official Press Release.

## ಬಾಲ ಶಕ್ತಿ ಹಾಗೂ ಬಾಲ ಪುರಸ್ಕಾರ ಪುರಸ್ಕಾರಕ್ಕೆ ಆನ್‌ಲೈನ್‌ನಲ್ಲಿ ಅರ್ಜಿ ಆಹ್ವಾನ

ಬೆಂಗಳೂರು, ಆಗಸ್ಟ್ 2 ( ಕರ್ನಾಟಕ ವಾರ್ತೆ)

2019–20ನೇ ಸಾಲಿನಲ್ಲಿ ಅಸಾಧಾರಣ ಸಾಧನೆ ಮಾಡಿದ ಮಕ್ಕಳಿಗೆ ನೀಡಲಾಗುವ ಬಾಲ ಶಕ್ತಿ ಪುರಸ್ಕಾರ ಮತ್ತು ಮಕ್ಕಳ ಕಲ್ಯಾಣ ಕ್ಷೇತ್ರದಲ್ಲಿ ಸೇವೆ ಸಲ್ಲಿಸಿದ ವ್ಯಕ್ತಿ ಮತ್ತು ಸಂಸ್ಥೆಗಳಿಗೆ ನೀಡಲಾಗುವ ಬಾಲ ಕಲ್ಯಾಣ ಪುರಸ್ಕಾರ ಪ್ರಶಸ್ತಿಗಳನ್ನು ನೀಡಲು ಭಾರತ ಸರ್ಕಾರವು ಮಾರ್ಗಸೂಚಿಗಳನ್ವಯ ಸೂಕ್ತ ಪ್ರಸ್ತಾವನೆಗಳನ್ನು ಅರ್ಹ ಮಕ್ಕಳು/ವ್ಯಕ್ತಿ/ಸಂಸ್ಥೆಗಳಿಂದ ನಾಮಪತ್ರಗಳನ್ನು **"ತಿತಿತಿ.ಟಿಛಿಚಿ-ತಿಛಿಜ.ಟಿಛಿ.ಎಟ" ಜಾಲತಾಣದಲ್ಲಿ ದಿನಾಂಕ: 31.08.2019ರ ಒಳಗಾಗಿ ಸಲ್ಲಿಸಲು ಸೂಚಿಸಿರುತ್ತದೆ.**

ಅದರಂತೆ ಭಾರತ ಸರ್ಕಾರದ ಅಧಿಕೃತ ಜಾಲತಾಣ "ತಿತಿತಿ.ಟಿಛಿಚಿ-ತಿಛಿಜ.ಟಿಛಿ.ಎಟ"ನಲ್ಲಿ ಅರ್ಹ ನಾಮ ನಿರ್ದೇಶಿತರು ಪ್ರಸ್ತಾವನೆಗಳನ್ನು ಭಾರತ ಸರ್ಕಾರಕ್ಕೆ ಸಲ್ಲಿಸಬಹುದಾಗಿದೆ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಪ್ರಕಟಣೆಯಲ್ಲಿ ತಿಳಿಸಿದೆ.

## ಕಬ್ಬನ್‌ಪಾರ್ಕ್‌ನಲ್ಲಿ ಈ ಭಾನುವಾರ

**ಬೆಂಗಳೂರು, ಆಗಸ್ಟ್ 2 ( ಕರ್ನಾಟಕ ವಾರ್ತೆ)**

ಶ್ರೀ ಚಾಮರಾಜೇಂದ್ರ ಉದ್ಯಾನವನ (ಕಬ್ಬನ್ ಪಾರ್ಕ್) ಒಳರಸ್ತೆಗಳಲ್ಲಿ ಭಾನುವಾರದ ದಿನಗಳಂದು ಸಾರ್ವಜನಿಕ ವಾಹನ ಸಂಚಾರವನ್ನು ನಿಷೇಧಿಸಲಾಗಿದ್ದು, ಉದ್ಯಾನವನದ ಆವರಣದಲ್ಲಿ ಸಾರ್ವಜನಿಕರು, ಪ್ರವಾಸಿಗರು ಮತ್ತು ನಡಿಗೆದಾರರ ಅನುಕೂಲಕ್ಕಾಗಿ ಪ್ರತಿ ಭಾನುವಾರದ ದಿನಗಳಂದು ವಿವಿಧ ಕಾರ್ಯ ಚಟುವಟಿಕೆಗಳನ್ನು ಹಮ್ಮಿಕೊಳ್ಳಲಾಗುತ್ತಿರುತ್ತದೆ. **ದಿನಾಂಕ: 04-08-2019** ರ ಭಾನುವಾರದಂದು ಶ್ರೀ ಚಾಮರಾಜೇಂದ್ರ ಉದ್ಯಾನವನದ (ಕಬ್ಬನ್ ಉದ್ಯಾನವನ) ಬ್ಯಾಂಡ್ ಸ್ಟ್ಯಾಂಡ್ ಆವರಣ ಹಾಗೂ ಮುಂಭಾಗದ ರಸ್ತೆಯಲ್ಲಿ ಮತ್ತು ಶ್ರೀ ಚಾಮರಾಜೇಂದ್ರ ಒಡೆಯರ್ ಪ್ರತಿಮೆಯ ಸುತ್ತಮುತ್ತಲಿನ ಪ್ರದೇಶದಲ್ಲಿ ಈ ಕೆಳಕಂಡ ಕಾರ್ಯ ಚಟುವಟಿಕೆಗಳನ್ನು ಹಮ್ಮಿಕೊಳ್ಳಲಾಗಿರುತ್ತದೆ. ಸಾರ್ವಜನಿಕರು, ಪ್ರವಾಸಿಗರು ಮತ್ತು ನಡಿಗೆದಾರರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ, ಸದರಿ ಕಾರ್ಯಚಟುವಟಿಕೆಗಳ ಸದುಪಯೋಗವನ್ನು ಪಡೆದುಕೊಳ್ಳುವಂತೆ ಈ ಮೂಲಕ ಕೋರಲಾಗಿದೆ.

1) ಕಬ್ಬನ್ ಉದ್ಯಾನವನದ ಆವರಣದಲ್ಲಿ ಬೆಳಿಗ್ಗೆ 8.00 ಗಂಟೆಯಿಂದ ಸಂಜೆ 5.00 ಗಂಟೆಯವರೆಗೆ ಉದ್ಯಾನವನದಲ್ಲಿರುವ ಒಳರಸ್ತೆಗಳಲ್ಲಿ ನಗರ ಭೂಸಾರಿಗೆ ನಿರ್ದೇಶನಾಲಯರವರ ಸಹಯೋಗದೊಂದಿಗೆ **ಬಾಡಿಗೆ ರಹಿತ ಸೈಕಲ್ ಸವಾರಿ ಕಾರ್ಯಕ್ರಮವನ್ನು** ಏರ್ಪಡಿಸಲಾಗಿದೆ.

2) ಕಬ್ಬನ್ ಉದ್ಯಾನವನದ ಒಳರಸ್ತೆಗಳಲ್ಲಿ ಸಾರ್ವಜನಿಕರು, ಪ್ರವಾಸಿಗರು ಮತ್ತು ವಯೋವೃದ್ಧರ ಅನುಕೂಲಕ್ಕಾಗಿ ಎರಡು ಸಂಖ್ಯೆಯ **ಪರಿಸರ ಸ್ನೇಹಿ ವಿದ್ಯುತ್‌ಚಾಲಿತ ವಾಹನಗಳ** ಸೇವೆಯನ್ನು ನಿಗಧಿತ ಶುಲ್ಕ ನೀಡಿ ಸಾರ್ವಜನಿಕರು ಪಡೆಯಬಹುದು.

**I ಸ್ಥಳ: ಬ್ಯಾಂಡ್ ಸ್ಟ್ಯಾಂಡ್ ಆವರಣ**

- ಬೆಳಿಗ್ಗೆ 7.00 ಗಂಟೆಯಿಂದ 8.00 ಗಂಟೆಯವರೆಗೆ **ಯೂನಿವರ್ಸ್ ಆರ್ಟ್ ಫೌಂಡೇಶನ್** ಸಂಸ್ಥೆಯ ಸಹಯೋಗದೊಂದಿಗೆ **ಶರಣ್ಯ ರವರಿಂದ ಭರತನಾಟ್ಯ ಕಾರ್ಯಕ್ರಮವನ್ನು** ಏರ್ಪಡಿಸಲಾಗಿದೆ.

- ಬೆಳಿಗ್ಗೆ 8.00 ಗಂಟೆಯಿಂದ ಬೆಳಿಗ್ಗೆ 9.00 ಗಂಟೆಯವರೆಗೆ ಬಾಲಭವನ ಸೊಸೈಟಿ ಸಹಯೋಗದೊಂದಿಗೆ **"ಉದ್ಯಾನವನದಲ್ಲಿ ಉದಯರಾಗ"** ಎಂಬ ಶೀರ್ಷಿಕೆಯಡಿ **ಗಾನಕಲಾ ಆರ್ಟ್ ಅಕಾಡೆಮಿ ರವರಿಂದ ಸುಗಮ ಸಂಗೀತ** ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.

# ಎಸಿಬಿ ತನಿಖೆ

**ಬೆಂಗಳೂರು, ಆಗಸ್ಟ್ 2 ( ಕರ್ನಾಟಕ ವಾರ್ತೆ)**

ದಿನಾಂಕ:31.07.2019 ರಂದು ಭ್ರಷ್ಟಾಚಾರ ನಿಗ್ರಹ ದಳದ ಬೆಂಗಳೂರು ನಗರ ಠಾಣೆಯ ವಿವಿಧ ತಂಡಗಳಿಂದ ಕೆಲವು ಸರ್ಕಾರಿ ಅಧಿಕಾರಿಗಳು ತಮ್ಮ ಅಧಿಕಾರವನ್ನು ದುರುಪಯೋಗ ಪಡಿಸಿಕೊಂಡು ಖಾಸಗಿ ವ್ಯಕ್ತಿಗಳೊಂದಿಗೆ ಶಾಮೀಲಾಗಿ ಬಿಬಿಎಂಪಿ ರಸ್ತೆ ಅಗಲೀಕರಣಕ್ಕೆ ವಶಪಡಿಸಿಕೊಳ್ಳಲಾದ ಸೈಟುಗಳು ಮತ್ತು ಬಿಲ್ಡಿಂಗ್‌ಗಳ ಜಾಗಕ್ಕಿಂತ ಹೆಚ್ಚು ಜಾಗಕ್ಕೆ ಬೆಲೆ ನಿಗಧೀಕರಣ ಮಾಡಿಸಿಕೊಂಡು ಆ ಮೂಲಕ ಖಾಸಗಿ ವ್ಯಕ್ತಿಗಳಿಗೆ ಅಪಾರ ಪ್ರಮಾಣದ ಅಕ್ರಮ ಲಾಭ ಮಾಡಿಕೊಟ್ಟು ಬಿಬಿಎಂಪಿಗೆ ಮತ್ತು ಸರ್ಕಾರಕ್ಕೆ ಕೋಟ್ಯಾಂತರ ರೂಪಾಯಿ ನಷ್ಟವುಂಟು ಮಾಡಿರುವುದರಿಂದ, ಬಿಬಿಎಂಪಿ ಆಯುಕ್ತರಿಂದ ತನಿಖೆ ಕೈಗೊಳ್ಳಲು ಪೂರ್ವಾನುಮತಿ ಪಡೆದು ಭ್ರಷ್ಟಾಚಾರ ನಿಗ್ರಹ ದಳ ಬೆಂಗಳೂರು ನಗರ ಠಾಣೆಯಲ್ಲಿ ಪ್ರಕರಣ ದಾಖಲಾಗಿರುತ್ತದೆ. ಸದರಿ ಪ್ರಕರಣದಲ್ಲಿ ಹೊರಮಾವಿನ ಟಿಸಿ ಪಾಳ್ಯ ಮುಖ್ಯ ರಸ್ತೆ ಹಾಗೂ ವಾರಣಾಸಿ ರಸ್ತೆ ಅಗಲೀಕರಣಕ್ಕೆ ಸರ್ವೆ ನಂ.7ಕ್ಕೆ ಸಂಬಂಧಿಸಿದ ಜಮೀನಿನಲ್ಲಿ ಅಂದಾಜು **6,886 ಚ.ಅಡಿ** ಜಾಗ ಸ್ವಾಧೀನಪಡಿಸಿಕೊಂಡಿದ್ದು ಸ್ವಾಧೀನ ಪ್ರಕ್ರಿಯೇ ಪೂರ್ಣಗೊಳಸದೇ, ಅಕ್ರಮವಾಗಿ ಅಂದಾಜು **1,57,961 ಚ.ಅಡಿ** ಬೋಗಸ್ ಟಿ.ಡಿ.ಆರ್ ಅನ್ನು ಸೃಷ್ಟಿಸಿ ಅನ್ಯ ವ್ಯಕ್ತಿಗಳಿಗೆ ಅಕ್ರಮವಾಗಿ ದುಬಾರಿ ಬೆಲೆಗೆ ಮಾರಾಟ ಮಾಡಿರುತ್ತಾರೆ.

ಭ್ರಷ್ಟಾಚಾರ ನಿಗ್ರಹ ದಳ ಬೆಂಗಳೂರು ನಗರ ಠಾಣೆಯ ವಿವಿಧ ತಂಡಗಳಿಂದ ಆಪಾದಿತ ಸರ್ಕಾರಿ ನೌಕರರ ಮತ್ತು ಖಾಸಗಿ ವ್ಯಕ್ತಿಗಳಿಗೆ ಸಂಬಂಧಿಸಿದ **09 ಸ್ಥಳಗಳ ಮೇಲೆ** ಶೋಧನೆ ವಾರೆಂಟ್ ಪಡೆದು ಶೋಧನೆ ನಡೆಸಲಾಗಿರುತ್ತದೆ. ಶೋಧನಾ ಕಾರ್ಯವು ಮುಂದುವರೆದಿದ್ದು ಈವರೆಗೆ ಶೋಧನೆ ನಡಸಲಾದ ಜಾಗಗಳ ಮಾಹಿತಿ ಈ ಕೆಳಕಂಡಂತಿರುತ್ತವೆ.

1. ಶ್ರೀ.ನಾಗರಾಜು, ಕಾರ್ಯಪಾಲಕ ಅಭಿಯಂತರರು, ಬಿಬಿಎಂಪಿ ಚೋಳರ ಪಾಳ್ಯ, ಬೆಂಗಳೂರು ನಲ್ಲಿನ ವಾಸದ ಮನೆ.

2. ಶ್ರೀಮತಿ ಎಸ್ ನಂದನ, ಎ.ಆರ್.ಓ, ಬಿಬಿಎಂಪಿ ರವರ ಬಿ.ಟಿ.ಎಂ.ಲೇಔಟ್‌ನಲ್ಲಿನ ವಾಸದ ಮನೆ ಮತ್ತು ಈ ಹಿಂದೆ ಕರ್ತವ್ಯ ನಿರ್ವಹಿಸುತ್ತಿದ್ದ ಸಹಾಯಕ ಕಂದಾಯ ಅಧಿಕಾಗಳ ಕಛೇರಿ, ಹೊರಮಾವು ಉಪವಲಯ, ಬಿಬಿಎಂಪಿ ಬೆಂಗಳೂರು.
3. ಶ್ರೀ ಎಂ.ಕೆ.ರೋಚನ್ ರವರ ಹೆಚ್.ಆರ್.ಬಿ.ಆರ್ ಲೇಔಟ್, ಕಲ್ಯಾಣನಗರದಲ್ಲಿನ ವಾಸದ ಮನೆ.
4. ಗುಡ್ ಹೋಂ ವೆಂಚರ್ಸ್, ಕಲ್ಕೆರೆ ಮುಖ್ಯ ರಸ್ತೆ, ಹೊರಮಾವು ಬೆಂಗಳೂರು ನಲ್ಲಿನ ಕಛೇರಿ.
5. ಶ್ರೀ ವಿ,ಗಜೇಂದ್ರ ರವರ ಹೊರಮಾವು ಬೆಂಗಳೂರು ನಲ್ಲಿನ ವಾಸದ ಮನೆ.
6. ಜಿ.ವಿ.ಕನ್‌ಸ್ಟ್ರಕ್ಷನ್ ಕಲ್ಕೆರೆ ಮುಖ್ಯ ರಸ್ತೆ, ಬೆಂಗಳೂರು ನಗರದಲ್ಲಿನ ಕಛೇರಿ.
7. ಶ್ರೀ ಗೋಪಿ, ಸರ್ಜಾಪುರ ಮುಖ್ಯರಸ್ತೆ, ಬೆಂಗಳೂರು ನಗರದಲ್ಲಿನ ವಾಸದ ಮನೆ.
8. ಶ್ರೀಮತಿ ಆನೆಮ್ಮ, ಅಕ್ಷಯ ನಗರ ಕೌದೇನಹಳ್ಳಿ, ರಾಮಮೂರ್ತಿನಗರ ಬೆಂಗಳೂರು ನಲ್ಲಿನ ವಾಸದ ಮನೆ.

ಭ್ರಷ್ಟಾಚಾರ ನಿಗ್ರಹ ದಳ ಬೆಂಗಳೂರು ನಗರ ಠಾಣೆಯ ವಿವಿಧ ತಂಡಗಳಂದ ಮೇಲ್ಕಂಡ ಸ್ಥಳಗಳಲ್ಲಿ ಶೋಧನಾ ಕಾರ್ಯ ನಡೆಸಿ ಪ್ರಕರಣಕ್ಕೆ ಸಂಬಂಧಪಟ್ಟಂತೆ ದಾಖಲಾತಿಗಳನ್ನು ವಶಪಡಿಸಿಕೊಳ್ಳಲಾಗಿದೆ. ಪ್ರಕರಣದ ತನಿಖೆ ಮುಂದುವರೆದಿದೆ ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.